ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಚಿವರು

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE: 23/2/2020

# ಜಲಸಂಪನ್ಮೂಲ ಖಾತೆ ನಿಭಾಯಿಸಿ ತೋರಿಸುವೆ



**ಬೆಳಗಾವಿ:** ನೀರಾವರಿ ಖಾತೆಯಲ್ಲಿ ಪಕ್ಷ, ಜಾತಿ ಬರಲ್ಲ, ನಮ್ಮ ಭಾಗಕ್ಕೆ ಅನುಕೂಲ ಆಗುವಂತೆ ಕೆಲಸ ಮಾಡುತ್ತೇನೆ. ಮಹದಾಯಿ ವಿಚಾರದಲ್ಲಿ ಗೆಜೆಟ್ ನೋಟಿಫಿಕೇಷನ್ ಬಗ್ಗೆ ಫೆ.26 ರಂದು ದೆಹಲಿಯಲ್ಲಿ ಕೇಂದ್ರ ಸಚಿವರನ್ನು ಭೇಟಿ ಮಾಡಿ ಚರ್ಚೆ ನಡೆಸುತ್ತೇನೆ ಎಂದು ಜಲಸಂಪನ್ಮೂಲ ಸಚಿವ ರಮೇಶ್ ಜಾರಕಿಹೊಳಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಜಲ ಸಂಪನ್ಮೂಲ ಇಲಾಖೆ ದೊಡ್ಡದಾಗಿದೆ. ತನ್ನ ಕೈಯಲ್ಲಿ ಇದನ್ನು ನಿಭಾಯಿಸಲು ಆಗಲ್ಲ ಎಂದು ವಿರೋಧಿಗಳು ಹೇಳುತ್ತಾರೆ. ಆದರೆ, ನಾನು ಇದನ್ನು ನಿಭಾಯಿಸಿ ತೋರಿಸುತ್ತೇನೆ. ಮಹದಾಯಿ ಯೋಜನೆ ಅನುಷ್ಠಾನಕ್ಕೆ ಬಜೆಟ್‌ನಲ್ಲಿ 200 ಕೋಟಿ ರು. ಮೀಸಲು ಇಡಲಾಗಿದೆ. ಇನ್ನೂ ಹೆಚ್ಚಿನ ಹಣ ನೀಡಲು ಸರಕಾರ ಬದ್ಧವಾಗಿದೆ. ಮಹದಾಯಿ ವಿಚಾರದಲ್ಲಿ ಕುಡಿಯುವ ನೀರಿನ ಯೋಜನೆಗೆ ಯಾವುದೇ ಅನುಮತಿ ಬೇಕಿಲ್ಲ. ಗೋವಾ ಸುಪ್ರೀಂ ಕೋರ್ಟ್‌ಗೆ ಹೋದರೆ ಹೋಗಲಿ. ನಾವು ಕಾನೂನಿನ ರೀತಿಯಲ್ಲಿ ಹೋರಾಟ ಮಾಡುತ್ತೇವೆ ಎಂದು ರಮೇಶ್ ಜಾರಕಿಹೊಳಿ ಹೇಳಿದರು.

ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾಗಿ ಜಗದೀಶ್ ಶೆಟ್ಟರ್ ನೇಮಕ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಜಗದೀಶ್ ಶೆಟ್ಟರ್ ಇದ್ದರೆ ನಾನು ಇದ್ದ ಹಾಗೆಯೇ. ಅವರು ಒಳ್ಳೆಯವರು, ಅವರೇ ಇರಲಿ. ಅವರು ಆಗಲ್ಲ ಅಂದ ಮೇಲೆ ನಾನು ಜಿಲ್ಲಾ ಉಸ್ತುವಾರಿ ಕೇಳುತ್ತೇನೆ.

**ನನ್ನ,ಸವದಿ ಮಧ್ಯೆ ಯಾವುದೇ ಭಿನ್ನಾಭಿಪ್ರಾಯ ಇಲ್ಲ:** ಲಕ್ಷ್ಮಣ್ ಸವದಿ ರಾಜಕೀಯ ಭವಿಷ್ಯಕ್ಕಾಗಿ ತಾನು ಬಲಿಯಾಗುತ್ತಿದ್ದೇನೆ ಎಂಬ ಆರೋಪಗಳನ್ನು ಕುಮಠಳ್ಳಿ ಅವರು ಬಲವಾಗಿ ನಿರಾಕರಿಸಿದರು. ನನ್ನ ಹಾಗೂ ಲಕ್ಷ್ಮಣ್ ಸವದಿ ಮಧ್ಯೆ ಯಾವುದೇ ಭಿನ್ನಾಭಿಪ್ರಾಯ ಇಲ್ಲ, ನಾನು ಮತ್ತು ಲಕ್ಷ್ಮಣ್ ಸವದಿ ಒಗ್ಗಟ್ಟಾಗಿದ್ದೇವೆ. ಸಾಕಷ್ಟು ಸಮಯ ಭೇಟಿಯಾಗಿದ್ದೇವೆ. ಅಥಣಿ ಕ್ಷೇತ್ರದ ಅಭಿವೃದ್ಧಿಗೆ ಇಬ್ಬರೂ ಒಗ್ಗಟ್ಟಾಗಿ ಶ್ರಮಿಸುತ್ತೇವೆ. ಒಂದು ಮನೆತನದಲ್ಲಿ ನಾಲ್ಕು ಮಂದಿ ಅಣ್ಣ ತಮ್ಮಂದಿರಿದ್ದರೆ ಭಿನ್ನಾಭಿಪ್ರಾಯ ಬರುವುದು ಸಹಜ ಎಂದು ಮಹೇಶ್ ಕುಮಠಳ್ಳಿ ವ್ಯಾಖ್ಯಾನಿಸಿದರು.

ಮುಂದಿನ ಸಂಪುಟ ವಿಸ್ತರಣೆ ವೇಳೆ ಸಚಿವ ಸ್ಥಾನ ನೀಡುವುದಾಗಿ ಹೇಳಿದ್ದಾರೆ. ಅಲ್ಲಿಯವರೆಗೆ ಒಂದು ಜವಾಬ್ದಾರಿ ನೀಡುವುದಾಗಿ ಸಿಎಂ ತಿಳಿಸಿದ್ದಾರೆ. ನನಗೆ ಎಂಎಸ್‌ಐಎಲ್ ಕೊಟ್ಟಿದ್ದರು. ಲ್ಯಾಂಡ್ ಆರ್ಮಿ ಕೊಡಿ ಎಂದಿದ್ದೇನೆ ಎಂದು ತಿಳಿಸಿದರು.

3